979 Sri Olekara Neharu Channabasappa : Hon'ble Minister for Public Works kindly answer to the below question?

a) Is there any proposal for construction of bridge from Devagiri to Mellaghatti between Haveri and Savanur taluks is under consideration of Government;

b) If so when the construction work starts;

Sri C.M.UDASI (Minister for Public Works) :

a) Yes.

b) The proposal is consider depending availability of funds.

648 ಶ್ರೀ ರೋಷನ್ ಬೇಗ್.ಆರ್. : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಚರಂಡಿ ಮತ್ತು ಮೋರಿಗಳ ಮೇಲೆ ಅನಧಿಕೃತವಾಗಿ ಖಾಸಗಿಯವರು ಕಟ್ಟಡದ ನಿರ್ಮಾಣ ಮಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ರೀತಿ ಅನಧಿಕೃತವಾಗಿ ಕಟ್ಟಿರುವ ಕಟ್ಟಡಗಳ ಸಂಖ್ಯೆಯೆಷ್ಟು;

ಇ) ಹಾಗಿದ್ದಲ್ಲಿ, ಇಂತಹ ಕಟ್ಟಡಗಳನ್ನು ತೆರವುಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಯವರು) :

ಅ) ಹೌದು.

ಆ) ಇಂತಹ 843 ಕಟ್ಟಡಗಳನ್ನು ಗುರುತಿಸಲಾಗಿದೆ.

ಇ) ಅವುಗಳ ಪೈಕಿ ಈಗಾಗಲೇ 222 ಕಟ್ಟಡಗಳನ್ನು ತೆರವುಗೊಳಿಸಲಾಗಿದೆ ಹಾಗೂ ಉಳಿದವುಗಳನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

750 ಶ್ರೀ ಮಾರಿಹಾಳ್ ಸುರೇಶ್ ಶಿವರುದ್ರಪ್ಪ (ಕಿತ್ತೂರು) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಿತ್ತೂರು ಕೋಟೆಯಲ್ಲಿ ಕೈಗೊಂಡ ಕಾಮಗಾರಿಗಳು ಕಳಪೆ ಮಟ್ಟದ್ದಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಕಳಪೆ ಕಾಮಗಾರಿ ಮಾಡಿದ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ;